## 'ಅನೈತಿಕ 6 ಸಚಿವರ ಉತ್ತರ ಬೇಕಿಲ್ಲ': ಉಭಯ ಸದನಗಳಲ್ಲಿ ಕಾಂಗ್ರೆಸ್ ತಕರಾರು

# 'ಕೈ' ಪಟ್ಟು: ಸರ್ಕಾರಕ್ಕೆ ಇಕ್ಕಟ್ಟು

ಪ್ರಜಾವಾಣಿ ವಾರ್ತೆ 10-3-21

ಬೆಂಗಳೂರು: 'ತಮ್ಮ ವಿರುದ್ಧ ಮಾನ ಹಾನಿಕರ ಸುದ್ದಿ, ವಿಡಿಯೊ ಪ್ರಕಟಿಸಬಾರದು' ಎಂದು ಕೋರಿ ಕೋರ್ಟ್‌ನಿಂದ ತಾತ್ಕಾಲಿಕ ತಡೆಯಾಜ್ಞೆ ಪಡೆದಿರುವ ಆರು ಸಚಿವರು ಹಾಗೂ ಸರ್ಕಾರವನ್ನು ಇಕ್ಕಟ್ಟಿಗೆ ಸಿಲುಕಿಸಲು ಮುಂದಾಗಿರುವ ಕಾಂಗ್ರೆಸ್ ನಾಯಕರು, 'ಅನೈತಿಕ ಸಚಿವರ ಉತ್ತರ ಬೇಕಿಲ್ಲ' ಎಂಬ ಘೋಷಣೆ ಮುಂದಿಟ್ಟು ವಿಧಾನ ಮಂಡಲದ ಉಭಯ ಸದನಗಳಲ್ಲೂ ಹೊಸ ಮಾದರಿಯ ಹೋರಾಟ ನಡೆಸಲು ಮುಂದಾಗಿದ್ದಾರೆ.

ಕಾಂಗ್ರೆಸ್‌ನ ಈ ಹೊಸ ಆಟ, ಆಡಳಿತಾರೂಢ ಬಿಜೆಪಿ ಸರ್ಕಾರವನ್ನು ಇಕ್ಕಟ್ಟಿಗೆ ದೂಡುವ ಸಾಧ್ಯತೆ ಇದ್ದು, ಸದನವನ್ನು ಹೇಗೆ ನಡೆಸುವುದೆಂಬ ಸಂಕಟವೂ ಶುರುವಾಗಿದೆ.

'ಲೈಂಗಿಕ ದೃಶ್ಯಗಳಿರುವ ಸಿ.ಡಿ ಪ್ರಸ್ತಾಪಿಸಲು ಹಾಗೂ ಆರು ಸಚಿವರನ್ನು ಇಕ್ಕಟ್ಟಿಗೆ ಸಿಲುಕಿಸುವ ಬಗ್ಗೆ ಸೋಮವಾರ ಸಂಜೆ ನಡೆದ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆಯಲ್ಲಿ ಚರ್ಚಿಸಲಾಗಿತ್ತು. ಸಚಿವರು ಉತ್ತರ ನೀಡಲು ಮುಂದಾದಾಗ, 'ಅನೈತಿಕ ಸಚಿವರ ಉತ್ತರ ಬೇಕಿಲ್ಲ' ಎಂದು ಪ್ರತಿಪಾದಿಸಿ ಸರ್ಕಾರವನ್ನು ಪೇಚಿಗೆ ಸಿಲುಕಿಸುವ ತಂತ್ರ ಹೆಣೆಯಲಾಗಿದೆ' ಎಂದು ಮೂಲಗಳು ಹೇಳಿವೆ.

ವಿಧಾನಸಭೆ ಹಾಗೂ ವಿಧಾನ-ಪರಿಷತ್ತಿನಲ್ಲಿ ಈ ಪ್ರಯೋಗವನ್ನು ಕಾಂಗ್ರೆಸ್ ಶಾಸಕರು ಮಂಗಳವಾರ ಮಾಡಿದರು. ಕೋರ್ಟ್ ಮೊರೆ ಹೋಗಿರುವ ಸಚಿವರಾದ ಕೆ.ಸಿ. ನಾರಾಯಣ ಗೌಡ, ಶಿವರಾಂ ಹೆಬ್ಬಾರ್, ಎಸ್.ಟಿ. ಸೋಮಶೇಖರ್, ಬೈರತಿ ಬಸವರಾಜ, ಡಾ. ಕೆ. ಸುಧಾಕರ್ ಹಾಗೂ ಬಿ.ಸಿ. ಪಾಟೀಲಅವರನ್ನುಗುರಿಮಾಡಿಕಾಂಗ್ರೆಸ್ ನಡೆ ಇಟ್ಟಿದೆ. ಪ್ರಶ್ನೋತ್ತರ ವೇಳೆಯಲ್ಲಿ ತಮ್ಮ ಇಲಾಖೆಗೆ ಸಂಬಂಧಿಸಿದ ಪ್ರಶ್ನೆಗೆ ಉತ್ತರ ಕೊಡುವಾಗ ನಿರಾಕರಿಸಿ, ಸಚಿವರನ್ನು ಮುಜುಗರಕ್ಕೆ ದೂಡುವುದು ಕಾಂಗ್ರೆಸ್ ತಂತ್ರದ ಭಾಗ.

'ಇಲಾಖೆಗೆ ಸಂಬಂಧಿಸಿ ಕೇಳಲಾದ ಪ್ರಶ್ನೆಗಳಿಗೆ ಬುಧವಾರ ಈ ಸಚಿವರ ಪೈಕಿ ಬಹುತೇಕರು ಉತ್ತರ ನೀಡಲಿದ್ದು, ಆ ವೇಳೆ ಈ ಹೋರಾಟವನ್ನು ಇನ್ನಷ್ಟು ತೀವ್ರಗೊಳಿಸುವುದು ಕಾಂಗ್ರೆಸ್ ಉದ್ದೇಶ' ಎಂದು ಶಾಸಕರೊಬ್ಬರು ತಿಳಿಸಿದರು.

'ಚಾಮರಾಜನಗರ ಜಿಲ್ಲೆಯ ಶಾಸಕರಿಗೆ ಪ್ರದೇಶಾಭಿವೃದ್ಧಿ ನಿಧಿಯಿಂದ ಎಷ್ಟು ಅನುದಾನ ನೀಡಲಾಗಿದೆ' ಎಂದು ಕಾಂಗ್ರೆಸ್‌ನ ಸಿ. ಪುಟ್ಟರಂಗಶೆಟ್ಟಿ ಪ್ರಶ್ನೆ ಕೇಳಿದ್ದರು. ಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಸಚಿವ ಕೆ.ಸಿ. ನಾರಾಯಣಗೌಡ ಉತ್ತರ ಕೊಡಲು ಮುಂದಾದರು. ಆಗ, 'ಅನೈತಿಕ ಸಚಿವರಿಂದ ಉತ್ತರ ಬೇಕಿಲ್ಲ' ಎಂದು ಶೆಟ್ಟಿ ಹೇಳಿದರು.

6ನೇ ಪುಟ ನೋಡಿ

## 'ಯುವತಿಗೆ ₹5 ಕೋಟಿ ಕೊಟ್ಟಿದ್ದಾರೆ'



'ನಾನು ಯಾವುದೇ ತಪ್ಪು ಮಾಡಿಲ್ಲ. ಆ ಸಿ.ಡಿ ನೂರಕ್ಕೆ ನೂರರಷ್ಟು ನಕಲಿ. ರಾಜಕೀಯವಾಗಿ ಮುಗಿಸಲು ನನ್ನ ವಿರುದ್ಧ ಷಡ್ಯಂತ್ರ ನಡೆದಿದೆ. ಆ ಯುವತಿಗೆ ₹ 50 ಲಕ್ಷ ಅಲ್ಲ, ₹ 5 ಕೋಟಿ ಕೊಟ್ಟಿದ್ದಾರೆ' ಎಂದು ಬಿಜೆಪಿ ಶಾಸಕ ರಮೇಶ ಜಾರಕಿಹೊಳಿ ಹೇಳಿದರು. ಯುವತಿಯೊಬ್ಬಳನ್ನು ಲೈಂಗಿಕವಾಗಿ ದುರ್ಬಳಕೆ ಮಾಡಿಕೊಂಡಿದ್ದಾರೆ ಎಂಬ ಆರೋಪಕ್ಕೆ ಸಿಲುಕಿ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ ಬಳಿಕ ಮೊದಲ ಬಾರಿಗೆ ಸುದ್ದಿಗೋಷ್ಠಿಯಲ್ಲಿ ಮಂಗಳವಾರ ಅವರು ಮಾತನಾಡಿದರು. 'ಇದು ಒಬ್ಬ ಮಹಾನ್ ನಾಯಕನ ಕುತಂತ್ರ. ನಾನು ಮಂತ್ರಿಯಾದಾಗ, ಆ ಸ್ಥಾನದಲ್ಲಿ ಮುಂದುವರಿಯುವ ಬಗ್ಗೆ ನನಗೆ ಅತ ಸವಾಲು ಹಾಕಿದ್ದ. ಆ ಬಗ್ಗೆ ಈಗ ಹೇಳಲು ನಾನು ಇಚ್ಛಿಸುವುದಿಲ್ಲ. ಇದೊಂದು ಸೂಕ್ಷ್ಮ ವಿಚಾರ. ಇದನ್ನು ರಾಜಕೀಯ ಮಾಡುವುದಕ್ಕೆ ಹೋಗಬಾರದು' ಎಂದ ರಮೇಶ, 'ಇದರ ಹಿಂದಿರುವವರನ್ನು ಜೈಲಿಗೆ ಹಾಕುವವರೆಗೂ ಬಿಡುವುದಿಲ್ಲ' ಎಂದು ಎಚ್ಚರಿಸಿದರು.

6ನೇ ಪುಟ ನೋಡಿ

## ಮುಂಬೈಗೆ ಕರೆದೊಯ್ದವರೇ ಸಿ.ಡಿ ಮಾಡಿದ್ರಾ?: ಎಚ್‌ಡಿಕೆ

'ಮುಂಬೈಗೆ ಹೋದ 12 ಮಂದಿಯದ್ದೂ ಸಿ.ಡಿಗಳಿವೆ ಎಂಬ ಸುದ್ದಿ ಮಾಧ್ಯಮಗಳಲ್ಲಿ ಬಂದಿದೆ. ಮುಂಬೈಗೆ ಕರೆದುಕೊಂಡು ಹೋದವರೇ ಇದನ್ನೆಲ್ಲಾ ಮಾಡಿದರೋ? ಸಿನಿಮಾ ರಂಗದ ಪರಿಣಿತರೂ ಜತೆಯಲ್ಲೇ ಇದ್ದರು. ಅವರೇನಾದರೂ ಮಾಡಿರಬಹುದಾ' ಎಂದು ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಎಚ್.ಡಿ. ಕುಮಾರಸ್ವಾಮಿ ಅನುಮಾನ ವ್ಯಕ್ತಪಡಿಸಿದರು.

ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 'ಸಿ.ಡಿಯಲ್ಲಿ ಇದ್ದಾರೆ ಎನ್ನಲಾದ ಯುವತಿಯನ್ನು ಸಂತ್ರಸ್ತೆ ಎನ್ನುತ್ತಿದ್ದೀರಿ. ಆ ಹೆಣ್ಣುಮಗಳು ಭೇಟಿ ನೀಡಿದ ಸ್ಥಳದ ವಿವರ, ಆಕೆಯ ಭಾವಚಿತ್ರವನ್ನೂ ಸಾಮಾಜಿಕ ಮಾಧ್ಯಮಗಳಲ್ಲಿ ಪ್ರಕಟಿಸಲಾಗಿದೆ. ಆಕೆ ಸಂತ್ರಸ್ತಳಾಗಿದ್ದು, ಅವರ ಕುಟುಂಬಕ್ಕೆ ನಿಜವಾಗಿಯೂ ಕಿರುಕುಳ ಆಗಿದ್ದರೆ ಸಾರ್ವಜನಿಕವಾಗಿ ಬಂದು ದೂರು ನೀಡಬೇಕಿತ್ತಲ್ಲವೇ' ಎಂದರು.

6ನೇ ಪುಟ ನೋಡಿ

# 'ಕೈ' ಪಟ್ಟು: ಸರ್ಕಾರಕ್ಕೆ ಇಕ್ಕಟ್ಟು

ಒಂದನೇ ಪುಟದಿಂದ

ಆಗ ಮಧ್ಯ ಪ್ರವೇಶಿಸಿದ ಸಚಿವ ಗೋವಿಂದ ಕಾರಜೋಳ, 'ಅನೈತಿಕ ಎಂಬ ಪದ ಬಳಸಿದ್ದು ಸರಿಯಲ್ಲ. ವಾಪಸ್ ಪಡೆಯಿರಿ' ಎಂದರು. 'ಲಿಖಿತ ಉತ್ತರ ನಿಮಗೆ ಕಳುಹಿಸಿದ್ದಾರೆ. ನೀವು ಬೇಕಿದ್ದರೆ ಪಡೆಯಿರಿ. ಹೀಗೆ ಹೇಳುವುದು ಸರಿಯಲ್ಲ' ಎಂದು ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಸೂಚಿಸಿದರು.

'ತಮ್ಮ ವಿರುದ್ಧದ ಯಾವುದೇ ವಿಡಿಯೊ, ಮಾನಹಾನಿಕರ ಸುದ್ದಿ ಪ್ರಕಟಿಸಬಾರದು ಎಂದು ಕೋರ್ಟ್‌ಗೆ ಹೋಗಿದ್ದು ನೀವಲ್ಲವೇ? ನಿಮ್ಮದು ಏನಾದರೂ ಇರಬೇಕಲ್ಲ. ಅನೈತಿಕ ಅಲ್ಲದೇ ಇನ್ನೇನು' ಎಂದು ಪುಟ್ಟರಂಗ ಶೆಟ್ಟಿ ಪ್ರಶ್ನಿಸಿದರು.

ಆ ವೇಳೆ ನಾರಾಯಣಗೌಡ, 'ನಾನು ಯಾರ ಆಸ್ತಿ ಹೊಡೆದಿಲ್ಲ. ಯಾವುದೇ ತಪ್ಪು ಮಾಡಿಲ್ಲ. ನನ್ನ ನೈತಿಕತೆ ಬಗ್ಗೆ ಪ್ರಶ್ನಿಸಲು ನಿಮಗೇನು ಅಧಿಕಾರವಿದೆ. ವಾಪಸ್ ತೆಗೆದುಕೊಳ್ಳಿ; ಇಲ್ಲ ಕ್ಷಮೆಯಾಚಿಸಿ. ಆ ಪದವನ್ನು ಕಡತದಿಂದ ತೆಗೆದು ಹಾಕಬೇಕು' ಎಂದು ಪಟ್ಟು ಹಿಡಿದರು. ಇದಕ್ಕೆ ಸಚಿವರಾದ ಎಸ್.ಟಿ. ಸೋಮಶೇಖರ್, ಶಿವರಾಂ ಹೆಬ್ಬಾರ್ ದನಿಗೂಡಿಸಿದರು.

'ನೀವು ತಪ್ಪು ಮಾಡಿಲ್ಲವೆಂದರೆ ಕೋರ್ಟ್‌ಗೆ ಹೋಗಿದ್ದೇಕೆ? ಅಷ್ಟಕ್ಕೂ ಪುಟ್ಟರಂಗ ಶೆಟ್ಟಿಯವರು ಅಸಂಸದೀಯ ಪದ ಬಳಸಿಲ್ಲವಲ್ಲ' ಎಂದು ಕಾಂಗ್ರೆಸ್‌ನ ಪಿ.ಟಿ. ಪರಮೇಶ್ವರ ನಾಯ್ಕ್ ಕುಟುಕಿದರು.

ಮಧ್ಯಪ್ರವೇಶಿಸಿದ ಸಣ್ಣ ನೀರಾವರಿ ಸಚಿವ ಜೆ.ಸಿ. ಮಾಧುಸ್ವಾಮಿ, 'ನೈತಿಕತೆ ಎಂಬುದು ಇದ್ದರೆ ನೀವು ಇಲ್ಲಿ ಬರುವ ಅಗತ್ಯವೇ ಇರಲಿಲ್ಲ' ಎಂದು ಪುಟ್ಟರಂಗ ಶೆಟ್ಟಿ (ಪುಟ್ಟರಂಗ ಶೆಟ್ಟರು ಸಚಿವರಾಗಿದ್ದ ವೇಳೆ, ವಿಧಾನಸೌಧದ ಕಚೇರಿಯಲ್ಲೇ ಆಪ್ತ ಸಹಾಯಕ ₹22 ಲಕ್ಷ ಲಂಚ ಪಡೆದಿದ್ದಾರೆ ಎಂಬ ಆರೋಪ ಎದುರಾಗಿತ್ತು) ಅವರನ್ನು ಉದ್ದೇಶಿಸಿ ಹೇಳಿದರು. ಈ ಮಾತಿನಿಂದ ಶೆಟ್ಟಿ ಸುಮ್ಮನೆ ಕುಳಿತರು.

ಪರಿಷತ್‌ನಲ್ಲೂ ಗದ್ದಲ: ವಿಧಾನ ಪರಿಷತ್ತಿನಲ್ಲಿ ಕಾಂಗ್ರೆಸ್ ಸದಸ್ಯರಾದ ಆರ್. ಪ್ರಸನ್ನಕುಮಾರ್ ಅವರು ನಗರ ಪ್ರದೇಶದಲ್ಲಿ ಅನಧಿಕೃತವಾಗಿ ನಿರ್ಮಿಸಿರುವ ಕಟ್ಟಡಗಳು ಹಾಗೂ ಬಸವರಾಜ ಪಾಟೀಲ್ ಇಟಗಿ ಅವರು ರಾಯಚೂರು ನಗರದ ಕುಡಿಯುವ ನೀರಿನ ಸಮಸ್ಯೆ ಕುರಿತು ನಗರಾಭಿವೃದ್ಧಿ ಸಚಿವ ಬೈರತಿ ಬಸವರಾಜ ಅವರಿಗೆ ಪ್ರಶ್ನೆ ಕೇಳಬೇಕಿತ್ತು. ಇಬ್ಬರೂ ಪ್ರಶ್ನೆ ಕೇಳುವುದನ್ನು ಬಹಿಷ್ಕರಿಸಿರುವುದಾಗಿ ಹೇಳಿದರು.

## 'ಯುವತಿಗೆ ₹5 ಕೋಟಿ ಕೊಟ್ಟಿದ್ದಾರೆ'

ಒಂದನೇ ಪುಟದಿಂದ

'ಯಶವಂತಪುರ ಪೊಲೀಸ್ ಠಾಣೆ ಅಕ್ಕಪಕ್ಕದಲ್ಲಿ ನಾಲ್ಕನೇ ಮಹಡಿ ಹಾಗೂ ಒರಾಯನ್ ಮಾಲ್ ಅಕ್ಕಪಕ್ಕದಲ್ಲಿ ಐದನೇ ಮಹಡಿಯಲ್ಲಿ ಈ ಷಡ್ಯಂತ್ರ ನಡೆದಿದೆ. ಯಾರು ಷಡ್ಯಂತ್ರ ಮಾಡಿದ್ದಾರೆ ಎಂದೂ ಗೊತ್ತು. ಆದರೆ, ನಾನು ಈಗ ಹೇಳುವುದಿಲ್ಲ. ನನಗೆ ರಾಜಕಾರಣ ಬೇಕಿಲ್ಲ, ಕುಟುಂಬದ ಗೌರವ ಮುಖ್ಯ. ನನ್ನ ಕುಟುಂಬದ ಮರ್ಯಾದೆ ವಾಪಸ್ ಬರಬೇಕು. ಬಾಲಚಂದ್ರ ಜಾರಕಿಹೊಳಿ ಹೇಳಿದಂತೆ ಈ ಷಡ್ಯಂತ್ರದಲ್ಲಿ 2 + 3 + 4 ರ ಕೈವಾಡವಿದೆ' ಎಂದರು.

'ಆ ಯುವತಿಗೆ ಅಪಾರ ಪ್ರಮಾಣದ ದುಡ್ಡಿನ ಜತೆಗೆ ವಿದೇಶದಲ್ಲಿ ಎರಡು ಫ್ಲ್ಯಾಟ್ ಕೂಡ ಕೊಟ್ಟಿದ್ದಾರೆ ಎಂಬ ಮಾಹಿತಿ ಇದೆ. ಇದರ ವಿರುದ್ಧ ನಾನೇಕೆ ದೂರು ನೀಡುವುದಕ್ಕೆ ಹೋಗಲಿ. ಆರೋಪವನ್ನು ನಾನು ಧೈರ್ಯವಾಗಿ ಎದುರಿಸುತ್ತೇನೆ' ಎಂದು ಹೇಳಿದರು. 'ಸಿ.ಡಿ ಬಗ್ಗೆ ನಾಲ್ಕು ತಿಂಗಳ ಮೊದಲೇ ತಿಳಿದಿತ್ತು. ಸಿ.ಡಿ ಬಿಡುಗಡೆಗೂ 26 ಗಂಟೆ ಮೊದಲೇ ಆ ಬಗ್ಗೆ ಹೈಕಮಾಂಡ್‌ನಿಂದ [illegible] ಬಂದಿತ್ತು. ಧೈರ್ಯದಿಂದ ಇರು ಎಂದೂ ಹೇಳಿತ್ತು. ಯಾವುದಕ್ಕೂ ಹೆದರದೆ ಸಭೆ ಮುಗಿಸಿ ಅಂದು ಮನೆಗೆ ಬಂದಿದ್ದೆ' ಎಂದು ತಿಳಿಸಿದರು.

'[illegible] ದೂರು ಕೊಟ್ಟರೂ ಎದುರಿಸುತ್ತೇನೆ. ನನ್ನನ್ನು ರಣರಂಗದಲ್ಲಿ ಎದುರಿಸಲು ಅವರಿಗೆ [illegible] ಕೋಟಿ ಖರ್ಚು ಮಾಡಿದರೂ ನನ್ನ ವಿರುದ್ಧ ಗೆಲ್ಲಲು ಆಗುವುದಿಲ್ಲ. ಹೀಗಾಗಿ, ಈ ರೀತಿ ಪಿತೂರಿ ಮಾಡಿದ್ದಾರೆ' ಎಂದು ಆಕ್ರೋಶ ವ್ಯಕ್ತಪಡಿಸಿದರು.

## 'ಮುಂಬೈಗೆ ಕರೆದೊಯ್ದವರೇ ಸಿ.ಡಿ ಮಾಡಿದ್ರಾ?'

ಒಂದನೇ ಪುಟದಿಂದ

'ಈ ಘಟನೆಯಿಂದ ನೊಂದುಕೊಂಡ ಆಕೆಯ ಕುಟುಂಬವನ್ನು ಸಂತ್ರಸ್ತರು ಎನ್ನಬೇಕೋ? ಯುವತಿಯನ್ನೇ ಸಂತ್ರಸ್ತೆ ಎನ್ನಬೇಕೋ? ಸಿ.ಡಿ ನಕಲಿ ಎಂದು ರಮೇಶ ಜಾರಕಿಹೊಳಿ ಹೇಳಿದ್ದಾರೆ. ಅವರನ್ನು, ಅವರ ಸಹೋದರರು, ಪತ್ನಿ ಮತ್ತು ಕುಟುಂಬದ ಸದಸ್ಯರನ್ನು ಸಂತ್ರಸ್ತರು ಎನ್ನಬೇಕೋ' ಎಂದು ಕೇಳಿದರು.

**ಸಲಹೆ ಕೊಟ್ಟವರಾರು?:** 'ಆರು ಮೇಧಾವಿ ಸಚಿವರು ತಮ್ಮ ಸಿ.ಡಿ ಬಿಡುಗಡೆ ಮಾಡದಂತೆ ನ್ಯಾಯಾಲಯದಿಂದ ತಾತ್ಕಾಲಿಕ ತಡೆಯಾಜ್ಞೆ ತಂದಿದ್ದಾರೆ. ಈ ಸಲಹೆ ಕೊಟ್ಟವರು ಯಾರು ಎಂಬುದು ಪ್ರಶ್ನೆ. ಸಚಿವರಿಗೆ ಸ್ವಯಂ ಆತ್ಮವಿಶ್ವಾಸ ಇದ್ದಿದ್ದರೆ ತಡೆ ತರುವ ಪ್ರಶ್ನೆ ಏಕೆ ಉದ್ಭವಿಸುತ್ತಿತ್ತು' ಎಂದು ಕುಮಾರಸ್ವಾಮಿ ಪ್ರಶ್ನಿಸಿದರು. 'ಇವೆಲ್ಲವೂ ವ್ಯಕ್ತಿಯ ಖಾಸಗಿ ಬದುಕಿನ ಹವ್ಯಾಸಕ್ಕೆ ಸಂಬಂಧಿಸಿದ ವಿಷಯಗಳು. ನಾಲ್ಕು ಗೋಡೆಗಳ ಮಧ್ಯೆ ನಡೆಯುವ ಸಂಗತಿಯನ್ನು ರೆಕಾರ್ಡ್ ಮಾಡಿ ರಾಜಕೀಯಕ್ಕೆ ಬಳಸುವ ಕೆಲಸವನ್ನು ನಮ್ಮ ಕುಟುಂಬ ಎಂದೂ ಮಾಡಿಲ್ಲ. ನಾನು ಕೂಡ ಒಮ್ಮೆ ತಪ್ಪು ಮಾಡಿದ್ದೆ. ವಿಧಾನಸಭೆಯಲ್ಲೇ ಅದನ್ನು ಒಪ್ಪಿಕೊಂಡಿದ್ದೇನೆ. ತಿದ್ದಿಕೊಂಡು ನಡೆಯುವುದು ಮುಖ್ಯ' ಎಂದರು.

**ಎಚ್.ಡಿ. ಕುಮಾರಸ್ವಾಮಿ, ರೇವಣ್ಣ ನನ್ನ ಪರ ಮಾತನಾಡಿದ್ದರು. ಯಡಿಯೂರಪ್ಪ ಅವರು ಧೈರ್ಯ ತುಂಬಿದರು. ನನ್ನ ಮನೋಬಲ ಹೆಚ್ಚಿಸಿದ ಕುಮಾರಸ್ವಾಮಿಗೆ ಕೃತಜ್ಞತೆಗಳು**

**ರಮೇಶ ಜಾರಕಿಹೊಳಿ**, ಬಿಜೆಪಿ ಶಾಸಕ

**ರಮೇಶ ಜಾರಕಿಹೊಳಿ ಪ್ರಕರಣ ಕುರಿತು ಕಬ್ಬನ್ ಪಾರ್ಕ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ. ಈ ಬಗ್ಗೆ ಬುಕ್ ಆಫ್ ಲಾ ಪ್ರಕಾರ ತನಿಖೆ ನಡೆಸಲಾಗುವುದು**

**ಬಸವರಾಜ ಬೊಮ್ಮಾಯಿ**

ಗೃಹ ಸಚಿವ